# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/576/ಗ್ರಾಪಂಕಾ/2015 ದಿನಾಂಕ:16.12.2015.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1/DE/9/2016/ARE-10 Dt:14.07.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/9/2016/ARE-10 Dt:17.07.2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/629/ಗ್ರಾಪಂಕಾ/2017 ದಿನಾಂಕ:03.08.2017.
5. ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:04.09.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"That you DGO Sri Govindappa, Panchayath Develpoment Officer, Ajjalapur Grama Panchayath, Yadgir Taluk, Yadgir District, has given a cheque of Rs.2,500/- to the Grama Panchayath Member Sri Ramesh without following the procedure for motor repair under political pressure and misappropriated the Government funds, Therefore you DGO, being a Government/Public servant has failed to maintain absolute integrity besides devotion to duty and acted in a manner unbecoming of a Government Servant and thus committed misconduct as enumerated U/R 3(1) of the Karnataka Civil Service (Conduct) Rules, 1966."

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಬಿ.ವಿ ಗೋವಿಂದಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ, ಅಜಲಾಪೂರ ಗ್ರಾಮ

ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಸದರಿ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ರಮೇಶ್ ರವರಿಗೆ 2,500/- ಗಳ ಚೆಕ್ಕನ್ನು ನೀಡಿ, ಮೋಟಾರ್ ರಿಪೇರಿನ ಯಾವುದೇ ನಿಯಮಗಳನ್ನು ಪಾಲಿಸದೆ ರಾಜಕೀಯ ಒತ್ತಡಕ್ಕೆ ಮಣಿದು ಸರ್ಕಾರಿ ಹಣ ದುರ್ಬಳಕೆ ಮಾಡಿ ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii)ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ಮತ್ತು ಸದರಿಯವರು ಈ ಮುಂದೆ ಬಡ್ತಿಗೆ ಅರ್ಹನದಾಗ 2 ವರ್ಷಗಳ ಅವಧಿಗಳವರೆಗೆ ಇವರಿಗೆ ಬಡ್ತಿಯನ್ನು ನಿರಾಕರಿಸುವ ದಂಡನೆ ವಿಧಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಈ ಸಂಬಂಧ ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ, ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ತಮ್ಮ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಸದರಿಯವರು ದಿನಾಂಕ:18.01.2011 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ನೇಮಕಗೊಂಡು, ಕರ್ತವ್ಯಕ್ಕೆ ಹಾಜರಾಗಿರುವುದಾಗಿ ನಂತರ ದಿನಾಂಕ:09.05.2011 ರಿಂದ ದಿನಾಂಕ:11.06.2011 ರವರೆಗೆ ತರಬೇತಿಯಲ್ಲಿ ಇದ್ದಾಗ, ಶ್ರೀ ರಮೇಶ್, ಗ್ರಾಮ ಪಂಚಾಯಿತಿ ಸದಸ್ಯರು, ಬೋರ್‌ವೆಲ್ ದುರಸ್ತಿ ಮಾಡಿಸುವುದು ಅತೀ ತುರ್ತು ಹಾಗೂ ಜನ ಜಾನುವಾರುಗಳಿಗೆ ನೀರಿನ ಸಂಕಷ್ಟ ಇದೆ ಎಂದು ಹೇಳಿರುವುದರಿಂದ, ಅದಕ್ಕೆ ಸ್ಪಂದಿಸಿ ದುರಸ್ತಿಗೊಳಿಸಿ, ವೋಚರ್ ತಂದುಕೊಡುವಂತೆ ತಿಳಿಸಿರುವುದಾಗಿ ಹಾಗೂ ಇದು ಅವರ ತರಬೇತಿ ಅವಧಿಯಾಗಿದ್ದು, ಪ್ರಕ್ರಿಯೆಗಳ ಬಗ್ಗೆ ತಿಳುವಳಿಕೆ/ ಮಾಹಿತಿ ತಿಳಿದಿರುವುದಿಲ್ಲವೆಂದು, ಉದ್ದೇಶಪೂರ್ವಕವಾಗಿ ಅವರು ಶ್ರೀ ರಮೇಶ್ ರವರಿಗೆ ಚೆಕ್ ನೀಡಿರುವುಲ್ಲ, ಶ್ರೀ ರಮೇಶ್, ಗ್ರಾಮ ಪಂಚಾಯಿತಿ ಸದಸ್ಯರು ವಂಚಿಸಿರುವ ಮಾಹಿತಿ ಲಭ್ಯವಾದೊಡನೆ, ದಿನಾಂಕ:20.06.2012 ರಂದು ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ಲಿಖಿತವಾಗಿ ವರದಿ ಮಾಡಿ, ಶ್ರೀ ರಮೇಶ್ ರವರ ವಿರುದ್ಧ ಕ್ರಮ ಜರುಗಿಸಲು ಅನುಮತಿ ಕೋರಿರುವುದಾಗಿ ಅನುಮತಿ ಸ್ವೀಕೃತಿಯಾದ ನಂತರ, ಕ್ರಿಮಿನಲ್ ಮೊಕದ್ದಮೆ ದಾಖಲಿಸಿ, ಕಾನೂನಿನ ಕ್ರಮ ಜರುಗಿಸಿದ್ದಾಗಿ ತಿಳಿಸಿರುತ್ತಾರೆ. ಆರೋಪದಲ್ಲಿರುವಂತೆ ಅವರು ರಾಜಕೀಯ ಒತ್ತಡಕ್ಕೆ ಮಣಿದು, ಚೆಕ್ ನೀಡಿಲ್ಲವೆಂದು ಹಾಗೂ ಕರ್ತವ್ಯ ನಿರ್ಲಕ್ಷತೆ ಎಸಗಿರುವುದಿಲ್ಲವೆಂದು, ವಿಚಾರಣಾಧಿಕಾರಿಯವರು ಈ ಅಂಶಗಳನ್ನು ಪರಿಗಣಿಸದೆ, ಆರೋಪ ಸಾಬೀತಾಗಿದೆಯೆಂದು ವರದಿ ನೀಡಿದ್ದಾಗಿ ಹಾಗೂ ಪ್ರೊಬೆಷನರಿ ಅವಧಿಯಲ್ಲಿ ಪತ್ರ ವ್ಯವಹಾರ ಮಾಡಿ, ಗ್ರಾಮ ಪಂಚಾಯಿತಿ ಸದಸ್ಯರ ವಿರುದ್ಧ ಕ್ರಮ ಜರುಗಿಸಿರುವುದನ್ನು ಶ್ಲಾಘಿಸಬೇಕಾದ ಸಂದರ್ಭದಲ್ಲಿ ದಂಡನೆಗೆ ಶಿಫಾರಸ್ಸು ಮಾಡಿರುವುದು ನಿಯಮಬಾಹಿರವಾಗಿದೆಂದು ತಿಳಿಸಿರುತ್ತಾರೆ.

ಸದರಿ ಆಪಾದಿತರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲ, ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

In the cross examination, PW1 as admitted that bort the job cards Ex.P.2 were issued before DGO assumed the charge in Ajjalpur Gram Panchayath. He admits that two months before lodging the complaint two job cards have been cancelled. He admits that during Feb 2011 DGO has assumed the charge of PDO in Ajjalpur Gram Panchayath. He admits that it was the first appointment of DGO. He does not know that after his posting as PDO, he was deputed for training for one and half months. He has not investigated who issued both the job cards in the name of Ramesh and was the Executive Officer of Taluk Panchayath.

Further PW1 has denied that on 8.2.2012 itself DGO informed Executive Officer about two job cards. He admits that on 20.06.2012 DGO wrote a letter to E.O. regarding the illegality committed by member Ramesh. He has not verified that how many persons are there by name Ramesh S/o Balyanayka. He admits that in his investigation records, photos of job card holders are not found. He has not visited and enquired the shop in which the water pump was repaired. He admits that the motor pump was out of order during the month of May 2012. He does not know DGO was not available at that time, therefore member Ramesh got the motor pump repaired at is own cost.

DGO was very well aware that Sri Ramesh S/o Balya Nayak was the Gram Panchayath member. Inspite of it, he issued cheque EX P 11 in his favour. DGO has not produced any documents on record to show that the cheque was issued in favour of the relative of the said Gram Panchayath member namely Sri Ramesh S/o Balya Nayak and Ramesh S/o Balya Nayak is not the Gram Panchayth member. Knowing the said facts, DGO has issued cheque of Rs.2,500/- in favour of Gram Panchayath member Sri Ramesh, without following the procedure for motor repairs and under political pressure, misappropriated the Government funds.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

"That you DGO Sri Govindappa, Panchayath Develpoment Officer, Ajjalapur Grama Panchayath, Yadgir Taluk, Yadgir District, has given a cheque of Rs.2,500/- to the Grama Panchayath Member Sri Ramesh without following the procedure for motor rapair under political pressure and misappropriated the Government funds. Therefore you DGO, being a Government/Public servant has failed to maintain absolute integrity besides devotion to duty and acted in a manner unbecoming of Government Servant and thus committed misconduct as enumerated U/R 3(1) of the Karnataka Civil Service (Conduct) Rules, 1966."

ಸರ್ಕಾರವು ಸದರಿ ಪ್ರಕರಣದಲ್ಲಿ ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಇವರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ 8(iii)ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ಮತ್ತು ಸದರಿಯವರು ಈ ಮುಂದೆ ಬಡ್ತಿಗೆ ಅರ್ಹನದಾಗ 2 ವರ್ಷಗಳ ಅವಧಿಗಳವರೆಗೆ ಇವರಿಗೆ ಬಡ್ತಿಯನ್ನು ನಿರಾಕರಿಸುವ ದಂಡನೆ ವಿಧಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:629:ಗ್ರಾಪಂಕಾ2017 ಬೆಂಗಳೂರು, ದಿನಾಂಕ-16-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಬಿ.ವಿ ಗೋವಿಂದಪ್ಪ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜಲಾಪೂರ ಗ್ರಾಮ ಪಂಚಾಯಿತಿ, ಯಾದಗಿರಿ ತಾಲ್ಲೂಕು, ಯಾದಗಿರಿ

ಜಿಲ್ಲೆ, ಇವರು ಅಜಲಾಪೂರ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಸದರಿ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ರಮೇಶ್ ರವರಿಗೆ 2,500/– ಗಳ ಚೆಕ್ಕನ್ನು ನೀಡಿ, ಮೋಟಾರ್ ರಿಪೇರಿನ ಯಾವುದೇ ನಿಯಮಗಳನ್ನು ಪಾಲಿಸದೆ ರಾಜಕೀಯ ಒತ್ತಡಕ್ಕೆ ಮಣಿದು ಸರ್ಕಾರಿ ಹಣ ದುರ್ಬಳಕೆ ಮಾಡಿ ಕರ್ತವ್ಯಲೋಪ ಎಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii)ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ಮತ್ತು ಸದರಿಯವರು ಈ ಮುಂದೆ ಬಡ್ತಿಗೆ ಅರ್ಹನದಾಗ 2 ವರ್ಷಗಳ ಅವಧಿಗಳವರೆಗೆ ಇವರಿಗೆ ಬಡ್ತಿಯನ್ನು ನಿರಾಕರಿಸುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

17/x/17

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಯಾದಗಿರಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಯಾದಗಿರಿ ತಾಲ್ಲೂಕು, ಯಾದಗಿರಿ ಜಿಲ್ಲೆ.
6. ಶ್ರೀ ಬಿ.ವಿ ಗೋವಿಂದಪ್ಪ, ಪ್ರಸ್ತುತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಿ. ಬೊಮ್ಮಸಂದ್ರ ಗ್ರಾಮ ಪಂಚಾಯಿತಿ, ಗೌರಿಬಿದನೂರು ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.